## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.1206/2015

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ತಿಪ್ಪೇಸ್ವಾಮಿ ಟಿ.ಎನ್ | CW: 13 | PW: 8 |
| ತಂದೆಯ ಹೆಸರು | : | ನಿಂಗಪ್ಪ | | |
| ವಯಸ್ಸು | : | 43 | | |
| ವೃತ್ತಿ | : | ಪಿಐ, ಬೆಸ್ಕಾಂ ಜಾಗೃತಾ ದಳ, ದಾವಣಗೆರೆ | | |
| ವಾಸಸ್ಥಳ | : | ದಾವಣಗೆರೆ | | |

ದಿನಾಂಕಃ 06.03.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಸಾಕ್ಷಿಯ ವಿಚಾರಣೆಯನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ತೆಗೆದುಕೊಳ್ಳಲಾಯಿತು.

ಮುಖ್ಯವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ-

ನಾನು ದಿಃ 07.05.2015 ರಿಂದ ದಿಃ 18.10.2017 ರವರೆಗೆ ನ್ಯಾಮತಿ ಪೊಲೀಸ್ ಠಾಣೆಯಲ್ಲಿ ಪಿಎಸ್ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 27.07.2015 ರಂದು ಈ ಪ್ರಕರಣದ ಕಡತವನ್ನು ಚಾಸಾ 12 ರವರಿಂದ ಪಡೆದುಕೊಂಡು ತನಿಖೆ ಮುಂದುವರೆಸಿ, ಚಾಸಾ 11 ಮತ್ತು ಇತರೇ ಸಿಬ್ಬಂದಿ ರಾತ್ರಿ 8 ಗಂಟೆಗೆ ಸವಳಂಗ ಗ್ರಾಮದ ಬಸ್ ನಿಲ್ದಾಣದಲ್ಲಿದ್ದ 1 ರಿಂದ 3, 5 ಮತ್ತು 8 ಆರೋಪಿಗಳನ್ನು ವಶಕ್ಕೆ ಪಡೆದುಕೊಂಡು ರಾತ್ರಿ 9.30 ಕ್ಕೆ ಠಾಣೆಯಲ್ಲಿ ನನ್ನ ಮುಂದೆ ಹಾಜರುಪಡಿಸಿದ ಮೇರೆಗೆ ವಿಚಾರಣೆ

ಮಾಡಿ ದಸ್ತಗಿರಿ ಕ್ರಮ ಜರುಗಿಸಿರುತ್ತೇನೆ. ದಿಃ 28.07.2015 ರಂದು ಮೇಲೆ ಹೇಳಿದ ಆರೋಪಿಗಳನ್ನು ನ್ಯಾಯಾಲಯದಲ್ಲಿ ಹಾಜರುಪಡಿಸಿರುತ್ತೇನೆ. ಅದೇ ದಿನ ಮಧ್ಯಾಹ್ನ 1 ಗಂಟೆಗೆ ಕೃತ್ಯ ಸ್ಥಳಕ್ಕೆ ಭೇಟಿ ನೀಡಿ ಚಾಸಾ 2 ಮತ್ತು 3 ರವರನ್ನು ಪಂಚರನ್ನಾಗಿ ಬರಮಾಡಿಕೊಂಡು ಅವರಿಗೆ ನೋಟೀಸ್ ಜಾರಿ ಮಾಡಿ ಚಾಸಾ 1 ಸ್ಥಳ ತೋರಿಸಿದ ಮೇರೆಗೆ ಮಧ್ಯಾಹ್ನ 1.45 ರಿಂದ 2.30 ರ ಸಮಯದಲ್ಲಿ ಸ್ಥಳ ಪಂಚನಾಮೆ ಜರುಗಿಸಿ, ಹಿಡಿಗಾತ್ರದ ಒಂದು ಕಾಡು ಜಾತಿಯ ಕಲ್ಲು , 2 ಅಡಿ ಉದ್ದದ ಕಾಡು ಕಟ್ಟಿಗೆಯ ದೊಣ್ಣೆಯನ್ನು ಅಮಾನತ್ತುಪಡಿಸಿಕೊಂಡು, ಪೋಟೋ ತೆಗೆಸಿರುತ್ತೇನೆ. ಚಾಸಾ 4 ರಿಂದ 9 ರವರ ಹೇಳಿಕೆ ಮತ್ತು ಚಾಸಾ 1 ರವರ ಮರುಹೇಳಿಕೆ ಪಡೆದುಕೊಂಡಿರುತ್ತೇನೆ. ನಂತರ ಠಾಣೆಗೆ ಬಂದು ಕೃತ್ಯ ನಡೆದ ಸ್ಥಳದಲ್ಲಿ ವಶಪಡಿಸಿಕೊಂಡ ಮಾಲನ್ನು ಠಾಣಾ ಪಿಎಫ್ ನಲ್ಲಿ ಸೇರಿಸಿರುತ್ತೇನೆ. ದಿಃ 18.08.2015 ರಂದು ಚಾಸಾ 7 ರವರ ಗಾಯದ ಪ್ರಮಾಣ ಪತ್ರವನ್ನು ಚಾಸಾ 10 ರವರಿಂದ ಪಡೆದುಕೊಂಡಿರುತ್ತೇನೆ. ದಿಃ 27.08.2015 ರಂದು ವಿಚಾರಣೆಗೆ ಹಾಜರಾಗುವಂತೆ ಚಾಸಾ 1 ರವರಿಗೆ ಪೊಲೀಸ್ ನೋಟೀಸ್ ಜಾರಿ ಮಾಡಿರುತ್ತೇನೆ. ಆರೋಪಿಯ ವಿರುದ್ಧ ತನಿಖೆ ಪೂರ್ಣಗೊಳಿಸಿ ದಿಃ 30.08.2015 ರಂದು ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಆರೋಪಿಯು ನ್ಯಾಯಾಲಯದಲ್ಲಿ ಗೈರು ಹಾಜರಿದ್ದು ಆರೋಪಿಯ ಗುರುತಿಸುವಿಕೆಗೆ ಆರೋಪಿ ಪರ ವಕೀಲರು ತಕರಾರು ಇಲ್ಲ ಎಂದು ತಿಳಿಸಿರುತ್ತಾರೆ. ಸಾಕ್ಷಿಯು ನ್ಯಾಯಾಲಯದ ಮುದ್ದೆ ಮಾಲು ಗಳನ್ನು ನೋಡಿ ಗುರುತಿಸಿರುತ್ತಾರೆ.

ಸಾಕ್ಷಿಯು ನಿಪಿ 2 ಸ್ಥಳ ಪಂಚನಾಮೆಯಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ 2(ಡಿ) ಎಂದು ಗುರುತಿಸಲಾಯಿತು. ನಿಪಿ 3 ಪೊಟೋ ನೋಡಿ ಗುರುತಿಸಿರುತ್ತಾರೆ. ಚಾಸಾ 7 ರವರ ಗಾಯದ ಪ್ರಮಾಣ ಪತ್ರವನ್ನು ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಗಾಯದ ಪ್ರಮಾಣ ಪತ್ರವನ್ನು ನಿಪಿ 7 ಎಂದು, ಸಾಕ್ಷಿಯ ಸಹಿಯನ್ನು ನಿಪಿ 7(ಎ) ಎಂದು ಗುರುತಿಸಲಾಯಿತು. ಚಾಸಾ 11 ರವರ ಮೂಲಕ ಚಾಸಾ 1 ರವರಿಗೆ ನೀಡಿದ

ಪೊಲೀಸ್ ನೋಟೀಸ್ ನ್ನು ನಿಪಿ 8 ಎಂದು, ಸಾಕ್ಷಿಯ ಸಹಿಯನ್ನು ನಿಪಿ 8(ಎ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ- ಆರೋಪಿ ಪರ ಶ್ರೀ. ಎಂ ಆರ್ ಎಂ ವಕೀಲರಿಂದಃ-

ದಿಃ 27.07.2015 ರಂದು ಈ ಪ್ರಕರಣದ ಕಡತವನ್ನು ಚಾಸಾ 12 ರವರಿಂದ ಪಡೆದುಕೊಂಡು ತನಿಖೆ ಮುಂದುವರೆಸಿ, ಚಾಸಾ 11 ಮತ್ತು ಇತರೇ ಸಿಬ್ಬಂದಿ ರಾತ್ರಿ 8 ಗಂಟೆಗೆ ಸವಳಂಗ ಗ್ರಾಮದ ಬಸ್ ನಿಲ್ದಾಣದಲ್ಲಿದ್ದ 1 ರಿಂದ 3, 5 ಮತ್ತು 8 ಆರೋಪಿಗಳನ್ನು ವಶಕ್ಕೆ ಪಡೆದುಕೊಂಡು ರಾತ್ರಿ 9.30 ಕ್ಕೆ ಠಾಣೆಯಲ್ಲಿ ನನ್ನ ಮುಂದೆ ಹಾಜರುಪಡಿಸಿದ ಮೇರೆಗೆ ವಿಚಾರಣೆ ಮಾಡಿ ದಸ್ತಗಿರಿ ಕ್ರಮ ಜರುಗಿಸಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ದಿಃ 28.07.2015 ರಂದು ಮೇಲೆ ಹೇಳಿದ ಆರೋಪಿಗಳನ್ನು ನ್ಯಾಯಾಲಯದಲ್ಲಿ ಹಾಜರುಪಡಿಸಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಅದೇ ದಿನ ಮಧ್ಯಾಹ್ನ 1 ಗಂಟೆಗೆ ಕೃತ್ಯ ಸ್ಥಳಕ್ಕೆ ಭೇಟಿ ನೀಡಿ ಚಾಸಾ 2 ಮತ್ತು 3 ರವರನ್ನು ಪಂಚರನ್ನಾಗಿ ಬರಮಾಡಿಕೊಂಡು ಅವರಿಗೆ ನೋಟೀಸ್ ಜಾರಿ ಮಾಡಿ ಚಾಸಾ 1 ಸ್ಥಳ ತೋರಿಸಿದ ಮೇರೆಗೆ ಮಧ್ಯಾಹ್ನ 1.45 ರಿಂದ 2.30 ರ ಸಮಯದಲ್ಲಿ ಸ್ಥಳ ಪಂಚನಾಮೆ ಜರುಗಿಸಿ, ಹಿಡಿಗಾತ್ರದ ಒಂದು ಕಾಡು ಜಾತಿಯ ಕಲ್ಲು, 2 ಅಡಿ ಉದ್ದದ ಕಾಡು ಕಟ್ಟಿಗೆಯ ದೊಣ್ಣೆಯನ್ನು ಅಮಾನತ್ತುಪಡಿಸಿಕೊಂಡು, ಫೋಟೋ ತೆಗೆಸಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಚಾಸಾ 4 ರಿಂದ 9 ರವರ ಹೇಳಿಕೆ ಮತ್ತು ಚಾಸಾ 1 ರವರ ಮರುಹೇಳಿಕೆ ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನಂತರ ಠಾಣೆಗೆ ಬಂದು ಕೃತ್ಯ ನಡೆದ ಸ್ಥಳದಲ್ಲಿ ವಶಪಡಿಸಿಕೊಂಡ ಮಾಲನ್ನು ಠಾಣಾ ಪಿಎಫ್ ನಲ್ಲಿ ಸೇರಿಸಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ದಿಃ 18.08.2015 ರಂದು ಚಾಸಾ 7 ರವರ ಗಾಯದ ಪ್ರಮಾಣ ಪತ್ರವನ್ನು ಚಾಸಾ 10 ರವರಿಂದ ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ದಿಃ 27.08.2015 ರಂದು ವಿಚಾರಣೆಗೆ ಹಾಜರಾಗುವಂತೆ ಚಾಸಾ 1 ರವರಿಗೆ ಪೊಲೀಸ್ ನೋಟೀಸ್ ಜಾರಿ ಮಾಡಿರುತ್ತೇನೆ ಎಂದು ಸುಳ್ಳು

ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಆರೋಪಿಯ ವಿರುದ್ಧ ತನಿಖೆ ಪೂರ್ಣಗೊಳಿಸಿ ದಿಃ 30.08.2015 ರಂದು ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.